ವಿಷಯ:- ಗುಳ್ಳೇದಗುಡ್ಡಕ್ಕೆ ಕುಡಿಯುವ ನೀರಿನ ಸರಬರಾಜು.

51(126)

ಶ್ರೀ ರಾಜಶೇಖರ್ ಶೀಲವಂತ (ಗುಳೇದಗುಡ್ಡ):- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

1. ಗುಳೇದಗುಡ್ಡದಲ್ಲಿ ಕುಡಿಯುವ ನೀರಿನ ತೊಂದರೆ ಇರುವುದು ಹಾಗೂ ಯೋಜನೆಯ ಕಾರ್ಯಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಬಂದಿದ್ದಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು):-

1. ಗುಳೇದಗುಡ್ಡದಲ್ಲಿ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಯೋಜನೆಯ ಕಾರ್ಯವು ಪ್ರಗತಿಯಲ್ಲಿದ್ದು ಇದನ್ನು ಇನ್ನೂ ತ್ವರಿತಗೊಳಿಸಲಾಗುವುದು.

2. ಈ ಯೋಜನೆಯನ್ನು ಮಾರ್ಚ 1997ರ ಅಂತ್ಯದೊಳಗೆ ಚಾಲ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಪರಿಶಿಷ್ಟ ಅಭಿವೃದ್ಧಿ ಯೋಜನೆಗಳ ಜಾರಿಗೆ ಪ್ರತ್ಯೇಕ ಸಂಸ್ಥೆ.

52(104)

ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ):- ಮಾನ್ಯ ಸಮಾಜ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಪರಿಶಿಷ್ಟರ ಅಭಿವೃದ್ಧಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಫಲಾನುಭವಿಗಳಿಗೆ ದೊರೆಯದೆ ದುರ್ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ವಿಶೇಷ ಘಟಕ ಯೋಜನೆಯಡಿ ಕೇಂದ್ರ ಸರ್ಕಾರವು ನೀಡುತ್ತಿರುವ ಹಣವೆಷ್ಟು;

ಇ) ಈ ಯೋಜನೆಯಡಿ ಯಾವ ಯಾವ ಕ್ಷೇತ್ರಗಳಿಗೆ ಹಣವನ್ನು ಮೀಸಲಿಡಲಾಗಿದೆ; (ಕ್ಷೇತ್ರವಾರು ವಿವರ ನೀಡುವುದು);

ಈ) ಪರಿಶಿಷ್ಟರ ಅಭಿವೃದ್ಧಿಗೆ ಪ್ರತ್ಯೇಕ ಸಂಸ್ಥೆಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರದವರ ಪರಿಶೀಲನೆಯಲ್ಲಿದೆಯೇ?

ಶ್ರೀ ಕೆ.ಎಂ. ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) ಹೌದು. ದುರ್ಬಳಕೆಯಾಗಿರುವ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ. ಅಂತಹ ಪ್ರಕರಣಗಳನ್ನು ಪರಿಶೀಲಿಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮವನ್ನು ಜರುಗಿಸಲು ಈಗಾಗಲೇ ಕ್ರಮ ಕೈಗೊಂಡಿದೆ. ಹಾಗೂ ಈ ರೀತಿಯಾಗದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.